ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಅಂಕೋಲಾ

ಸಿಸಿ ನಂಬರ. 557/2023

ಸಿ ಡಬ್ಲ್ಯೂ-10

ಪಿ ಡಬ್ಲ್ಯೂ-6

ದಿಃ 10-01-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಸಾಕ್ಷಿಯ ಹೆಸರುಃ ಅಮೀತ್ ನಾಯಕ

ತಂದೆಯ ಹೆಸರುಃ ಹಮ್ಮಣ್ಣ

ವಯಸ್ಸುಃ 35 ವರ್ಷ

ಉದ್ಯೋಗಃ ಖಾಸಗಿ ಕೆಲಸ

ವಿಳಾಸಃ ಬಾವಿಕೇರಿ, ಅಂಕೋಲಾ

ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದಃ

ಚಾಸಾ-9 ಮತ್ತು 11 ರವರು ನಮ್ಮ ಊರಿನವರು. ದಿಃ12-04-2023 ರಂದು ಶೋಭಾ ಸುಚೇತ್ ನಾಯಕ ಇವರಿಗೆ ಅಪಘಾತವಾಗಿರುತ್ತದೆ ಎಂದು ನನ್ನ ಸ್ನೇಹಿತರು ನನಗೆ ಕರೆ ಮಾಡಿ ತಿಳಿಸಿರುತ್ತಾರೆ. ನಾನು ಆ ಸಮಯದಲ್ಲಿ ಬೇಳಾಬಂದರಿನ ನಮ್ಮ ಅತ್ತೆ ಮನೆಯಲ್ಲಿ ಇದ್ದೇನು. ನಂತರ ನಾನು ರಾತ್ರಿ 9.30 ಗಂಟೆ ಸುಮಾರಿಗೆ ಆರ್ಯಾ ಮೆಡಿಕಲ್ ಆಸ್ಪತ್ರೆಗೆ ಬಂದಿರುತ್ತೇನೆ. ಅಲ್ಲಿಂದ ಮೃತ ದೇಹವನ್ನು ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ. ಮಾರನೇ ದಿನ ಪೊಲೀಸರು ನನ್ನ ಸಹಿಯನ್ನು ಪಡೆದಿರುತ್ತಾರೆ. ಅಪಘಾತಪಡಿಸಿದ ವಾಹನ ಸಂಖ್ಯೆ ಹೇಳಲು ಬರುವುದಿಲ್ಲ. ಪೊಲೀಸರು

ಪೊಲೀಸ್ ಠಾಣೆಗೆ ವಾಹನವನ್ನು ತಂದಿದ್ದು ಇದೇ ವಾಹನ ಎಂದು ಹೇಳಿರುತ್ತಾರೆ. ಆರೋಪಿತರನ್ನು ಗುರುತಿಸುವಲ್ಲಿ ಸಾಕ್ಷಿಯು ವಿಫಲರಾಗಿರುತ್ತಾರೆ. ನಾನು ಈ ವಿಷಯವಾಗಿ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಇವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಅನುಮತಿಸಲಾಯಿತು.)

ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ರವರಿಂದಃ

2. ನೀವು ಹೇಳಿದ ದಿನಾಂಕದಂದು ಚಾಸಾ-9 ಮತ್ತು 11 ರವರ ಜೊತೆಗೆ ಮಾತನಾಡುತ್ತಾ ಸರ್ವೀಸ್ ಸೆಂಟರ್ ಬಳಿ ನಿಂತುಕೊಂಡಿರುತ್ತೀರಿ ಎಂದರೆ ಸರಿಯಲ್ಲ. ಆಗ ನಿಮ್ಮ ಎದುರಿನಲ್ಲಿಯೇ ಆಟೋ ರಿಕ್ಷಾ ನಂ. ಕೆ ಎ 30 ಎ 5087 ನೆದ್ದರ ಚಾಲಕನು ಫಿರ್ಯಾದಿಯ ಹೆಂಡತಿಗೆ ಅಪಘಾತಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ನೀವು ಮತ್ತು ನಿಮ್ಮ ಜೊತೆ ಇದ್ದ ಸ್ನೇಹಿತರು ಎಲ್ಲರೂ ಸೇರಿಕೊಂಡು ಉಪಚಾರ ಮಾಡಿರುತ್ತೀರಿ ಎಂದರೆ ಸರಿಯಲ್ಲ. ಗ್ಯಾರೇಜಿಗೆ ರಿಪೇರಿಗೆ ಬಂದಂತಹ ಕಾರಿನ ಮುಖಾಂತರ ನೀವೇ ಆರ್ಯಾ ಆಸ್ಪತ್ರೆಗೆ ಕರೆದುಕೊಂಡು ಬಂದಿರುತ್ತೀರಿ ಎಂದರೆ ಸರಿಯಲ್ಲ. ಸದರಿ ಅಪಪಘಾತಕ್ಕೆ ಆಟೋ ರಿಕ್ಷಾ ಚಾಲಕನ ಅತಿ ವೇಗ ಹಾಗೂ ಅಜಾಗರೂಕತೆಯ ಕಾರಣದಿಂದ ಆಗಿರುತ್ತದೆ ಎಂದು ಪೊಲೀಸರ ಮುಂದೆ ಹೇಳಿಕೆಯನ್ನು ಕೊಟ್ಟಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾನು ಆ ಸಮಯದಲ್ಲಿ ಆ ಸ್ಥಳದಲ್ಲಿ ಇರಲಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಹೇಳಿಕೆಯ ಭಾಗವನ್ನು ನಿಪಿ-13 ಎಂದು ಗುರುತಿಸಲಾಯಿತು. ನಿಮಗೆ ಈ

ಪ್ರಕರಣದ ಸಂಪೂರ್ಣ ಮಾಹಿತಿ ಇದ್ದರೂ ಸಹ, ನೀವೆ ಫಿರ್ಯಾದಿಯ ಹೆಂಡತಿಗೆ ಉಪಚರಿಸಲು ಸಹಾಯ ಮಾಡಿದರೂ ಸಹ, ಆಟೋ ಚಾಲಕನಾಗಿದ್ದ 1ನೇ ಆರೋಪಿಯು ಓಡಿ ಹೋಗಿರುವುದನ್ನು ನೋಡಿದರೂ ಸಹ, ಈ ವಿಚಾರಕ್ಕೆ ಸಂಬಂಧಪಟ್ಟು ಪೋಲೀಸರಿಗೆ ಹೇಳಿಕೆಯನ್ನು ನೀಡಿದರೂ ಸಹ ಆರೋಪಿತರಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ.ವಿ.ಎಸ್ ಇವರಿಂದಃ

3. ನಿಮ್ಮ ವಿರುದ್ಧ ಒಂದು ಕ್ರಿಮೀನಲ್ ಪ್ರಕರಣ ಚಾಲ್ತಿಯಲ್ಲಿದ್ದು, ನ್ಯಾಯಾಲಯಕ್ಕೆ ಓಡಾಡುತ್ತಿದ್ದೀರಿ ಎಂದರೆ ಸರಿ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ).

ಓ ಹೇ ಕೇ ಸರಿ ಇದೆ

C/c. ಜೆ.ಎಂ.ಎಫ್.ಸಿ., ಅಂಕೋಲಾ.